**Akashvani : Bangalore**
**National Bulletin In Kannada**
**20.01.2025 / 13.10 hrs**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**20.01.2025 / 13.10 hrs**

**<><*<><>*><>**

**ಮುಖ್ಯಾಂಶಗಳು**

೧. ಬಿಹಾರದ ಪಾಟ್ನಾದಲ್ಲಿ ಇಂದು ೮೫ನೇ ಅಖಿಲ ಭಾರತ ಪೀಠಾಸೀನಾಧಿಕಾರಿಗಳ ಸಮಾವೇಶ ಆರಂಭ

೨. ಅಮೆರಿಕದಲ್ಲಿಂದು ಕೇಂದ್ರ ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ - ಜಪಾನ್ ಸಹವರ್ತಿ ತಕೇಶಿ ಇವಾಯ ಭೇಟಿ

೩. ಪ್ರಯಾಗ್‌ರಾಜ್ ಮಹಾಕುಂಭಮೇಳ ; ಆಹಾರ ಸುರಕ್ಷತೆ ಖಚಿತ ಪಡಿಸಿಕೊಳ್ಳಲು ಎಫ್‌ಎಸ್‌ಎಸ್‌ಎಐ ನಿಂದ ಕ್ರಮ

೪. ಆರ್.ಜಿ. ಕರ್ ವೈದ್ಯಕೀಯ ಕಾಲೇಜು ವೈದ್ಯೆ ಹತ್ಯೆ ಪ್ರಕರಣ ; ಅಪರಾಧಿ ಸಂಜಯ್ ರೈಗೆ ಇಂದು ಶಿಕ್ಷೆ ಪ್ರಕಟ

೫. ಆಸ್ಟ್ರೇಲಿಯನ್ ಓಪನ್ ಟೆನಿಸ್ ಗ್ರ್ಯಾನ್‌ಸ್ಲಾಮ್ ; ಇಟಲಿಯ ಜೆನ್ನಿಕ್ ಸಿನ್ನರ್ ಕ್ವಾರ್ಟರ್ ಫೈನಲ್ ಪ್ರವೇಶ

**<><*<><>*><>**

ಬಿಹಾರದ ಪಾಟ್ನಾದಲ್ಲಿ ಇಂದು ೮೫ನೇ ಅಖಿಲ ಭಾರತ ಪೀಠಾಸೀನಾಧಿಕಾರಿಗಳ ಸಮಾವೇಶ ಆರಂಭವಾಗಿದೆ. ಲೋಕಸಭಾ ಸ್ಪೀಕರ್ ಓಂ ಬಿರ್ಲಾ, ೪೩ ವರ್ಷಗಳ ನಂತರ ನಡೆಯುತ್ತಿರುವ ಎರಡು ದಿನಗಳ ಈ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಸಂವಿಧಾನದ ೭೫ನೇ ವಾರ್ಷಿಕೋತ್ಸವದ ಸಂದರ್ಭದಲ್ಲಿ ದೇಶದ ಸಾಂವಿಧಾನಿಕ ಮೌಲ್ಯಗಳನ್ನು ಬಲಪಡಿಸುವಲ್ಲಿ, ಸಂಸತ್ತು ಮತ್ತು ರಾಜ್ಯ ವಿಧಾನಮಂಡಲದ ಕೊಡುಗೆ ವಿಷಯದ ಮೇಲೆ ನಡೆಯುವ ಕಾರ್ಯಕ್ರಮದಲ್ಲಿ ದೇಶದ ವಿವಿಧ ಭಾಗಗಳ ಶಾಸಕಾಂಗ ಸಂಸ್ಥೆಗಳ ಪೀಠಾಸೀನಾಧಿಕಾರಿಗಳು

ವಿಚಾರ ವಿನಿಮಯ ಮಾಡಲಿದ್ದಾರೆ. ಕರ್ನಾಟಕ ವಿಧಾನಸಭಾಧ್ಯಕ್ಷ ಯು.ಟಿ. ಖಾದರ್ ಸಹ ಈ ಸಮಾವೇಶದಲ್ಲಿ ಭಾಗವಹಿಸಲಿದ್ದಾರೆ.

<><*<><>*><>

ಡೊನಾಲ್ಡ್ ಟ್ರಂಪ್ ಇಂದು ಅಮೆರಿಕದ ೪೭ನೇ ಅಧ್ಯಕ್ಷರಾಗಿ ಪ್ರಮಾಣವಚನ ಸ್ವೀಕರಿಸಲಿದ್ದಾರೆ. ವಾಷಿಂಗ್‌ಟನ್ ಡಿಸಿಯಲ್ಲಿ ಅಮೆರಿಕದ ಮುಖ್ಯ ನ್ಯಾಯಮೂರ್ತಿ ಜಾನ್ ರಾಬರ್ಟ್ಸ್ ಅವರ ಸಮ್ಮುಖದಲ್ಲಿ ಅಧ್ಯಕ್ಷೀಯ ಪ್ರಮಾಣವಚನ ನಡೆಯಲಿದೆ.  ಪ್ರಮಾಣವಚನ ಸಮಾರಂಭವು ಭಾರತೀಯ ಕಾಲಮಾನ ರಾತ್ರಿ ೮:೩೦ ಕ್ಕೆ ಪ್ರಾರಂಭವಾಗಲಿದೆ. ಟ್ರಂಪ್ ಅವರು ಅಧಿಕೃತ ಅಧಿಕಾರ ವರ್ಗಾವಣೆಯ ಭಾಗವಾಗಿ ತಮ್ಮ ಉದ್ಘಾಟನಾ ಭಾಷಣವನ್ನು ಮಾಡಲಿದ್ದು, ಜೆಡಿ ವ್ಯಾನ್ಸ್ ಅವರು ಅಮೆರಿಕದ ಉಪಾಧ್ಯಕ್ಷರಾಗಿ ಪ್ರಮಾಣವಚನ ಸ್ವೀಕರಿಸಲಿದ್ದಾರೆ. ಹಲವಾರು ವಿದೇಶಿ ನಾಯಕರು ಪ್ರಮಾಣವಚನ ಸಮಾರಂಭದಲ್ಲಿ ಭಾಗವಹಿಸುವ ನಿರೀಕ್ಷೆಯಿದೆ. ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್ ಜೈಶಂಕರ್ ಅವರು ಸಮಾರಂಭದಲ್ಲಿ ಭಾರತವನ್ನು ಪ್ರತಿನಿಧಿಸಲಿದ್ದಾರೆ. ಅವರ ಜೊತೆಗೆ ಅರ್ಜೆಂಟೀನಾ ಅಧ್ಯಕ್ಷ ಜೇವಿಯರ್ ಮಿಲಿ, ಇಟಲಿಯ ಪ್ರಧಾನಿ ಜಾರ್ಜಿಯಾ ಮೆಲೋನಿ ಸೇರಿದಂತೆ ಹಲವು ಗಣ್ಯರು ಭಾಗವಹಿಸಲಿದ್ದಾರೆ.

<><*<><>*><>

ಅಮೆರಿಕದ ವಾಷಿಂಗ್‌ಟನ್ ಡಿಸಿಯಲ್ಲಿಂದು ಕೇಂದ್ರ ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್, ಜಪಾನ್‌ನ ವಿದೇಶಾಂಗ ಸಚಿವ ತಕೇಶಿ ಇವಾಯ ಅವರನ್ನು ಭೇಟಿಯಾದರು. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ ಹಂಚಿಕೊಂಡಿರುವ ಡಾ. ಎಸ್. ಜೈಶಂಕರ್, ಉಭಯ ನಾಯಕರು ಉಭಯ ರಾಷ್ಟ್ರಗಳ ನಡುವಿನ ದ್ವಿಪಕ್ಷೀಯ ಸಹಕಾರದ ಪ್ರಗತಿಯ ಪರಿಶೀಲನೆ ಮತ್ತು ಕ್ವಾಡ್ ಸಂಬಂಧಿತ ವಿಷಯಗಳ ಕುರಿತು ಸಮಾಲೋಚನೆ ನಡೆಸಲಾಗಿದೆ ಎಂದಿದ್ದಾರೆ. ಅಮರಿಕ ಅಧ್ಯಕ್ಷರಾಗಿ ಡೊನಾಲ್ಡ್ ಟ್ರಂಪ್ ಪ್ರಮಾಣ ವಚನ ಸ್ವೀಕಾರ ಸಮಾರಂಭದಲ್ಲಿ ಪಾಲ್ಗೊಳ್ಳಲು ಅಮೆರಿಕಾಗೆ ತೆರಳಿರುವ ಡಾ. ಎಸ್. ಜೈಶಂಕರ್, ಆಸ್ಟ್ರೇಲಿಯಾದ ವಿದೇಶಾಂಗ ಸಚಿವೆ ಪೆನ್ನೀ ವಾಂಗ್ ಅವರನ್ನು ಸಹ ಭೇಟಿಯಾದರು.

<><*<><>*><

ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ಮಹಾಕುಂಭ ಮೇಳದಲ್ಲಿ ಲಕ್ಷಾಂತರ ಭಕ್ತರಿಗೆ ಸುರಕ್ಷಿತ ಮತ್ತು ಆರೋಗ್ಯಕರ ಆಹಾರ ಲಭ್ಯತೆ ಖಚಿತಪಡಿಸಿಕೊಳ್ಳಲು ಭಾರತೀಯ ಆಹಾರ ಸುರಕ್ಷತೆ ಮತ್ತು ಮಾನದಂಡಗಳ ಪ್ರಾಧಿಕಾರ - ಎಫ್‌ಎಸ್‌ಎಸ್‌ಎಐ ಹಲವಾರು ಕ್ರಮಗಳನ್ನು ಕೈಗೊಂಡಿದೆ. ಆಹಾರ ಸುರಕ್ಷತಾ ಅಧಿಕಾರಿಗಳ ನಿಯೋಜನೆ, ಮೊಬೈಲ್ ಆಹಾರ ಪರೀಕ್ಷಾ ಪ್ರಯೋಗಾಲಯಗಳು ಜಾಗೃತಿ ಅಭಿಯಾನಗಳು ನಡೆಸುವ ಮೂಲಕ ಆಹಾರ ಸುರಕ್ಷತೆಗಾಗಿ ಪ್ರಮುಖ ಕ್ರಮಗಳನ್ನು ಕೈಗೊಳ್ಳುತ್ತಿದೆ.

ಈ ಕುರಿತು ಒಂದು ವರದಿ :

ಉತ್ತರಪ್ರದೇಶ ಸರ್ಕಾರದ ಸಹಯೋಗದೊಂದಿಗೆ ಎಫ್‌ಎಸ್‌ಎಸ್‌ಎಐ ಕುಂಭಮೇಳದ ವಿವಿಧ ವಲಯಗಳಿಗೆ ಆಹಾರ ವಿಶ್ಲೇಷಕರೊಂದಿಗೆ ೧೦ ಸಂಚಾರಿ ಆಹಾರ ಪರೀಕ್ಷಾ ಪ್ರಯೋಗಾಲಯಗಳನ್ನು ನಿಯೋಜಿಸಿದೆ. ಈ ಪ್ರಯೋಗಾಲಯಗಳು ಆಹಾರದಲ್ಲಿ ಕಲಬೆರಕೆ ಪರೀಕ್ಷಿಸುತ್ತವೆ. ಮೇಳವನ್ನು ೫ ಝೋನ್‌ಗಳು ಮತ್ತು ೨೫ ವಲಯಗಳಲ್ಲಿ ವಿಂಗಡಿಸಲಾಗಿದ್ದು, ನೈರ್ಮಲ್ಯ ಮತ್ತು ಸುರಕ್ಷತಾ ಮಾನದಂಡಗಳ ಮೇಲ್ವಿಚಾರಣೆ ನಡೆಸಲು ಈ ವಲಯಗಳಲ್ಲಿ ಒಟ್ಟು ೫೮ ಆಹಾರ ಸುರಕ್ಷತಾ ಅಧಿಕಾರಿಗಳನ್ನು ನಿಯೋಜಿಸಲಾಗಿದೆ. ಮೇಳದ ಸ್ಥಳದಲ್ಲಿರುವ ಹೋಟೇಲ್‌ಗಳು, ಡಾಬಾಗಳು ಹಾಗೂ ಸಣ್ಣ ತಿಂಡಿ ಅಂಗಡಿಗಳನ್ನು ನಿಯಮಿತ ತಪಾಸಣೆಗೆ ಒಳಪಡಿಸಲಾಗುತ್ತಿದೆ. ಆಹಾರ ಸುರಕ್ಷತೆ ಕುರಿತ ದೂರುಗಳನ್ನು ತ್ವರಿತ ಪರಿಹಾರಕ್ಕಾಗಿ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಎಫ್‌ಎಸ್‌ಎಸ್‌ಎಐ ಸೂಚಿಸಿದೆ.

<><*<><>*><>

ಭಾರತ ಸಂವಿಧಾನವನ್ನು ಅಳವಡಿಸಿಕೊಂಡು ೭೫ ವರ್ಷಗಳನ್ನು ಆಚರಿಸುತ್ತಿರುವ ಈ ಸಂದರ್ಭದಲ್ಲಿ ಅಂಚೆ ಇಲಾಖೆಯು ನವದೆಹಲಿಯ ರಾಷ್ಟ್ರೀಯ ಅಂಚೆ ಚೀಟಿ ಸಂಗ್ರಹಾಲಯದಲ್ಲಿ ಇಂದಿನಿಂದ ೩ ದಿನಗಳ ಕಾಲ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಿದೆ. ರಾಷ್ಟ್ರೀಯ ಅಂಚೆ ಚೀಟಿ ಸಂಗ್ರಹಾಲಯದಲ್ಲಿ ನಡೆಯುತ್ತಿರುವ ಈ ಕಾರ್ಯಕ್ರಮದಲ್ಲಿ ಎಲ್ಲ ವಯಸ್ಸಿನ ಪ್ರವಾಸಿಗರಿಗೆ ವಿವಿಧ ಆಕರ್ಷಕ ಚಟುವಟಿಕೆಗಳನ್ನು ಆಯೋಜಿಸಲಾಗಿದೆ.

ರಸಪ್ರಶ್ನೆ, ಪ್ರದರ್ಶನ, ಅಂಚೆ ಚೀಟಿ ಸಫಾರಿ ಮತ್ತು ಪತ್ರ ಬರೆಯುವ ಸ್ಪರ್ಧೆಯನ್ನು ಆಯೋಜಿಸಲಾಗಿದೆ. ಫಿಲೇಟ್ಲಿ ವಸ್ತು ಸಂಗ್ರಾಯಲಕ್ಕೆ ಭೇಟಿ ನೀಡಿ, ಸುದ್ದಿಗಾರರೊಂದಿಗೆ ಮಾತನಾಡಿದ ಜ್ಯೋತಿರಾಧಿತ್ಯ ಸಿಂಧಿಯಾ, ಭಾರತೀಯ ಸಂವಿಧಾನ ದೇಶದ ಸಮೃದ್ಧಿ ಹಾಗೂ ಪ್ರಗತಿ ಪಥದ ದಾರಿದೀಪವಾಗಿದೆ. ಸಂವಿಧಾನದ ಕುರಿತು ಅರಿವು ಮೂಡಿಸಲು ವಿದ್ಯಾರ್ಥಿಗಳನ್ನು ವಸ್ತು ಸಂಗ್ರಾಲಯಕ್ಕೆ ಕರೆ ತರಲಾಯಿತು ಎಂದರು.

ಧ್ವನಿ : ಜ್ಯೋತಿರಾಧಿತ್ಯ ಸಿಂಧಿಯಾ

<><*<><>*><>

ಆರ್.ಜಿ ಕರ್ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ವೈದ್ಯಯ ಮೇಲೆ ಲೈಂಗಿಕ ದೌರ್ಜನ್ಯ ಮತ್ತು ಹತ್ಯೆ ಪ್ರಕರಣದಲ್ಲಿ ಅಪರಾಧಿ ಎಂದು ಘೋಷಿಸಲಾಗಿರುವ ಸಂಜಯ್ ರೈಗೆ ಕೊಲ್ಕೊತ್ತಾದ ಸಿಲ್ದಾ ನ್ಯಾಯಾಲಯ ಇಂದು ಶಿಕ್ಷೆಯನ್ನು ಪ್ರಕಟಿಸಲಿದೆ. ಕಳೆದ ಶನಿವಾರ ನಡೆದ ವಿಚಾರಣೆಯಲ್ಲಿ ನ್ಯಾಯಾಲಯ ಸಂಜಯ್ ರೈ ಅವರನ್ನು ತಪ್ಪಿತಸ್ಥ ಎಂದು ಘೋಷಿಸಿತ್ತು. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಕೇಂದ್ರೀಯ ತನಿಖಾ ಸಂಸ್ಥೆ - ಸಿಬಿಐ ಸಲ್ಲಿಸಿದ ಪುರಾವೆಗಳು ಅವರನ್ನು ಅಪರಾಧಿ ಎಂದು ಸಾಬೀತುಪಡಿಸುತ್ತವೆ ಎಂದು ನ್ಯಾಯಾಧೀಶರು ತಿಳಿಸಿದ್ದಾರೆ.

<><*<><>*><>

ಹಮಾಸ್ ಜೊತೆಗಿನ ಗಾಜಾ ಕದನ ವಿರಾಮ ಒಪ್ಪಂದ ೩ ಗಂಟೆ ತಡವಾಗಿ ನಿನ್ನೆ ಜಾರಿಗೆ ಬಂದಿದ್ದು, ಗಾಜಾದಲ್ಲಿ ಹಮಾಸ್ ಬಂಧನದಲ್ಲಿದ್ದ ಮೂರು ಒತ್ತೆಯಾಳುಗಳು ಇಸ್ರೇಲ್ ಪ್ರದೇಶಕ್ಕೆ ಮರಳಿದ್ದಾರೆ. ಇಸ್ರೇಲ್ ರಕ್ಷಣಾ ಪಡೆಗಳು ಬಿಡುಗಡೆಗೊಳಿಸಿದ ವಿಡಿಯೋದಲ್ಲಿ ಮೂರು ಒತ್ತೆಯಾಳುಗಳನ್ನು ಇಸ್ರೇಲ್‌ಗೆ ಹಿಂದಿರಿಗಿಸಲಾಗಿದೆ. ಒತ್ತೆಯಾಳುಗಳು ಇಸ್ರೇಲ್‌ಗೆ ಮರಳಿದ ತಕ್ಷಣ ಅವರಿಗೆ ವೈದ್ಯಕೀಯ ಚಿಕಿತ್ಸೆಗಾಗಿ ಆಸ್ಪತ್ರೆಗೆ ದಾಖಲಿಸಲಾಯಿತು. ಬಳಿಕ ಅವರನ್ನು ಅವರ ಕುಟುಂಬಸ್ಥರೊಂದಿಗೆ ಸೇರಿಸಲಾಯಿತು. ಪ್ರತಿ ಒಬ್ಬ ಇಸ್ರೇಲ್ ಒತ್ತೆಯಾಳು ಬಿಡುಗಡೆಯ ಪ್ರತಿಯಾಗಿ ೩೦ ಪ್ಯಾಲಿಸ್ತೇನಿಯಾ ಬಂಧಿತರನ್ನು ಬಿಡುಗಡೆಗೊಳಿಸಲಾಗುವುದು ಎಂದು ಗದನ ವಿರಾಮ ಒಪ್ಪಂದದಲ್ಲಿ ಉಲ್ಲೇಖಿಸಲಾಗಿದೆ ಎಂದು ಹಮಾಸ್ ಹೇಳಿಕೆಯಲ್ಲಿ ತಿಳಿಸಿದೆ.

<><*<><>*><>

ಗಾಜಾ ಪ್ರದೇಶದಲ್ಲಿ ಇಸ್ರೇಲ್ ಹಮಾಸ್ ನಡುವಿನ ಕದನ ವಿರಾಮ ಒಪ್ಪಂದ ಜಾರಿಯಾಗುತ್ತಿದ್ದಂತೆ ಆ ಪ್ರದೇಶದಲ್ಲಿ ಮಾನವೀಯ ನೆರವಿಗೆ ಪುಷ್ಟಿ ನೀಡಲಾಗುತ್ತಿದೆ. ಇದರ ಭಾಗವಾಗಿ ಯುನೈಟೆಡ್ ಅರಬ್ ಎಮಿರೇಟ್ಸ್ - ಯುಎಇ ಅಪರೇಷನ್ - ಚಿವಾಲ್‌ರಸ್ ನೈಟ್ ೩ ಕಾರ್ಯಾಚರಣೆಯ ಅತಿದೊಡ್ಡ ಹಂತವನ್ನು ಆರಂಭಿಸಿದ್ದು, ೧೦೦ ಟನ್‌ಗಳಿಗೂ ಹೆಚ್ಚು ಅಗತ್ಯ ಪರಿಹಾರ ಸಾಮಗ್ರಿಗಳನ್ನು ೧೦ ಟ್ರಕ್‌ಗಳಲ್ಲಿ ಗಾಜಾ ಪ್ರದೇಶಕ್ಕೆ ರವಾನಿಸಿದೆ. ಯುಎಇ ಅಧ್ಯಕ್ಷ ಶೇಖ್ ಮೊಹಮ್ಮದ್ ಬಿನ್ ಜಯೇದ್ ಅಲ್ ನಹ್ಯಾನ್ ಅವರ ನಿರ್ದೇಶನದ ಮೇರೆಗೆ ಪರಿಹಾರ ಕಾರ್ಯಕ್ಕೆ ಪುಷ್ಟಿ ನೀಡುವ ಪ್ರಯತ್ನಗಳ ಭಾಗವಾಗಿ ಈ ಕ್ರಮ ಕೈಗೊಳ್ಳಲಾಗಿದೆ. ಈವರೆಗೆ ಸುಮಾರು ೪೯ ಸಾವಿರದ ೭೮೪ ಟನ್‌ಗಳಿಗೂ ಹೆಚ್ಚು ಆಹಾರ ಪದಾರ್ಥ, ಚಳಿಗಾಲದ ಬಟ್ಟೆ ಮತ್ತು ಮೂಲಭೂತ

ಅವಶ್ಯಕತೆಗಳು ಸೇರಿದಂತೆ ಇತರ ಮಾನವೀಯ ನೆರವನ್ನು ಒದಗಿಸಲಾಗಿದೆ. ಕಾರ್ಯಾಚರಣೆಯ ವಿಶೇಷ ಬರ್ಡ್ಸ್ ಆಫ್ ಗುಡ್‌ನೆಸ್ ಉಪಕ್ರಮದ ಮೂಲಕ ನೆಲಮಾರ್ಗದಿಂದ ಸಂಪರ್ಕಿಸಲು ಸಾಧ್ಯವಾಗದ ಉತ್ತರ ಗಾಜಾದ ಪ್ರದೇಶಗಳಿಗೆ ಪರಿಹಾರ ಸಾಮಗ್ರಿಗಳನ್ನು ವಿಮಾನದ ಮೂಲಕ ಆಗಸದಿಂದಲೇ ವಿತರಿಸಲಾಗುತ್ತಿದೆ.

<><*<><>*><>

ಚೊಚ್ಚಲ ಖೋ ಖೋ ವಿಶ್ವಕಪ್ ಪ್ರಶಸ್ತಿ ಗೆದ್ದಿರುವ ಭಾರತದ ಪುರುಷರ ಹಾಗೂ ಮಹಿಳಾ ತಂಡಗಳಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಿ ನರೇಂದ್ರ ಮೋದಿ, ಕರ್ನಾಟಕ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಹಲವು ಗಣ್ಯರು ಅಭಿನಂದಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ರಾಷ್ಟ್ರಪತಿ, ದೇಶದ ಪಾರಂಪರಿಕ ಕ್ರೀಡೆಯಲ್ಲಿ ನಮ್ಮ ಆಟಗಾರರು ಪ್ರಾಬಲ್ಯ ಮೆರೆದಿದ್ದಾರೆ. ಪುರುಷ ಹಾಗೂ ಮಹಿಳೆಯರ ಈ ಐತಿಹಾಸಿಕ ಯಶಸ್ಸು ದೇಶದ ಯುವಕರಿಗೆ ಸ್ಫೂರ್ತಿದಾಯಕವಾಗಿದೆ ಎಂದು ತಿಳಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ, ಈ ಐತಿಹಾಸಿಕ ಗೆಲುವು ಉಭಯ ತಂಡಗಳ ಅವರ ಆಟಗಾರರ ಅಪ್ರತಿಮ ಕೌಶಲ್ಯ ಮತ್ತು ದೃಢ ನಿಶ್ಚಯದ ಪರಿಣಾಮವಾಗಿದೆ ಎಂದು ಶ್ಲಾಘಿಸಿದ್ದಾರೆ. ಕರ್ನಾಟಕ ಮುಖ್ಯಮಂತ್ರಿ ಸಿದ್ದರಾಮಯ್ಯ, ಈ ಅಮೋಘ ಸಾಧನೆ ಇತಿಹಾಸದ ಪುಟಗಳಲ್ಲಿ ಶಾಶ್ವತವಾಗಿ ಉಳಿಯಲಿದೆ. ಕರ್ನಾಟಕದ ಮೈಸೂರು ಜಿಲ್ಲೆಯ ಟಿ ನರಸೀಪುರ ತಾಲೂಕಿನ ಕುರುಬೂರಿನ ಯುವತಿ ಚೈತ್ರ. ಬಿ ಅವರು ವಿಶ್ವವಿಜೇತ ಮಹಿಳಾ ಖೊ-ಖೊ ತಂಡದ ಭಾಗವಾಗಿರುವುದು ನಾಡಿಗೆ ಹೆಮ್ಮೆಯ ಸಂಗತಿ ಎಂದು ಸಾಮಾಜಿಕ ಮಾಧ್ಯಮದಲ್ಲಿ ಸಂತಸ ಹಂಚಿಕೊಂಡಿದ್ದಾರೆ.

<><*<><>*><>

ಮೆಲ್ಬೋರ್ನ್‌ನಲ್ಲಿ ನಡೆಯುತ್ತಿರುವ ಆಸ್ಟ್ರೇಲಿಯನ್ ಓಪನ್ ಟೆನಿಸ್ ಗ್ರ್ಯಾನ್‌ಸ್ಲಾಮ್ ಟೂರ್ನಿಯ ಪುರುಷರ ಸಿಂಗಲ್ಸ್ ವಿಭಾಗದಲ್ಲಿ ಇಟಲಿಯ ಜೆನ್ನಿಕ್ ಸಿನ್ನರ್, ಡೆನ್ಮಾರ್ಕ್‌ನ ಹಾಗ್ಲರ್ ರ್ಯೂನ್ ವಿರುದ್ಧ ೬-೩, ೩-೬, ೬-೩, ೬-೨ ಸೆಟ್‌ಗಳ ಅಂತರದಲ್ಲಿ ಜಯ ಸಾಧಿಸಿ ಕ್ವಾರ್ಟರ್ ಫೈನಲ್ ಪ್ರವೇಶಿಸಿದ್ದಾರೆ. ಮಹಿಳೆಯರ ಸಿಂಗಲ್ಸ್ ವಿಭಾಗದ ೪ನೇ ಸುತ್ತಿನ ಪಂದ್ಯದಲ್ಲಿ ಉಕ್ರೇನ್‌ನ ಎಲಿನಾ ಸ್ವಿಟೊಲಿನಾ ಅವರು, ರಷ್ಯಾದ ವೆರೊನಿಕಾ ಕುದರ್ ಮೆತೊವಾ ವಿರುದ್ಧ ೬-೪, ೬-೧ ಸೆಟ್‌ಗಳ ಅಂತರದಲ್ಲಿ ಗೆಲುವು ಸಾಧಿಸಿ, ಕ್ವಾರ್ಟರ್ ಫೈನಲ್ ಪ್ರವೇಶಿಸಿದ್ದಾರೆ. ಇಂದು ನಡೆದ ಮತ್ತೊಂದು ಪಂದ್ಯದಲ್ಲಿ ಅಮೆರಿಕದ ಮೆಡಿಸನ್ ಕೀಸ್, ಕಜಕಿಸ್ತಾನದ ಎಲೆನಾ ರೈಬಾಕಿನ ವಿರುದ್ಧ ೬-೧, ೬-೧, ೬-೩ ಸೆಟ್‌ಗಳ ಅಂತರದಲ್ಲಿ ಗೆಲುವು ಸಾಧಿಸಿ, ಕ್ವಾರ್ಟರ್ ಫೈನಲ್ ಪ್ರವೇಶಿಸಿದ್ದಾರೆ.

<><*<><>*><>

ರಾಂಚಿಯಲ್ಲಿಂದು ಮಹಿಳಾ ಹಾಕಿ ಇಂಡಿಯಾ ಲೀಗ್ ಪಂದ್ಯಾವಳಿಯಲ್ಲಿ ಜೆಎಸ್‌ಡಬ್ಲ್ಯೂ ಸೂರ್ಮಾ ಹಾಕಿ ಕ್ಲಬ್ ಮತ್ತು ದೆಹಲಿ ಎಸ್‌ಜಿ ಪೈಪರ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಸಂಜೆ ೬ ಗಂಟೆಗೆ ಆರಂಭವಾಗಲಿದೆ. ಪುರುಷರ ಹಾಕಿ ಪಂದ್ಯಾವಳಿಯಲ್ಲಿ ಶ್ರಾಚಿರಾರ್ ಬೆಂಗಾಲ್ ಟೈಗರ್ಸ್ ತಂಡ ಜೆಎಸ್‌ಡಬ್ಲ್ಯೂ ಸೂರ್ಮಾ ಹಾಕಿ ಕ್ಲಬ್ ತಂಡವನ್ನು ಎದುರಿಸಲಿದ್ದು, ಈ ಪಂದ್ಯ ರಾತ್ರಿ ೮.೧೫ಕ್ಕೆ ಆರಂಭವಾಗಲಿದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧.೩೦ ಕ್ಕೆ <>*><>